ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

22

ಇಲಾಖೆ / ವಿಷಯ : DEPARTMENT / SUBJECT: ಸಂಸತ್ತು

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE 24/10/20


# ಹೊಸ ಸಂಸತ್ ಭವನಕ್ಕೆ ಡಿಸೆಂಬರ್‌ನಲ್ಲಿ ಶಂಕುಸ್ಥಾಪನೆ



**ಹೊಸದಿಲ್ಲಿ:** ನೂತನ ಸಂಸತ್ ಭವನ ನಿರ್ಮಾಣ . ಕಾಮಗಾರಿಯು ಡಿಸೆಂಬರ್‌ನಲ್ಲಿ ಆರಂಭವಾಗಲಿದೆ.

ಟಾಟಾ ಪ್ರಾಜೆಕ್ಟ್ಸ್ 861.90 ಕೋಟಿ ರೂ. ಅಂದಾಜು ವೆಚ್ಚದ ಈ ಕಾಮಗಾರಿಯ ಗುತ್ತಿಗೆ ಪಡೆದಿದೆ. ಡಿಸೆಂಬರ್‌ನಲ್ಲಿ ನಡೆಯುವ ಶಂಕುಸ್ಥಾಪನೆ ಸಮಾರಂಭದಲ್ಲಿ ರಾಷ್ಟ್ರಪತಿ ರಾಮನಾಥ ಕೋವಿಂದ್, ಪ್ರಧಾನಿ ನರೇಂದ್ರ ಮೋದಿ ಅವರು ಭಾಗ ವಹಿಸಲಿದ್ದಾರೆ. ನಿರ್ಮಾಣ ಕಾರ್ಯವನ್ನು 2022ರ ಅಕ್ಟೋಬರ್‌ನಲ್ಲಿ ಪೂರ್ಣಗೊಳಿಸುವ ಗುರಿ ಹೊಂದಲಾಗಿದೆ.

ಲೋಕಸಭೆ ಸ್ಪೀಕರ್ ಓಂ ಬಿರ್ಲಾ ಅವರು ಶುಕ್ರವಾರ ಉದ್ದೇಶಿತ ಹೊಸ ಸಂಸತ್ ಭವನ ನಿರ್ಮಾಣ ಕಾಮಗಾರಿಯ ಪೂರ್ವ ಸಿದ್ಧತೆಗಳ ಪರಿಶೀಲನೆ ನಡೆಸಿದರು. ''ಹೊಸ ಸಂಸತ್ ಭವನದ ನಿರ್ಮಾಣ ಕಾಮಗಾರಿ ವೇಳೆ ಈಗಿರುವ ಸಂಸತ್ ಭವನದಲ್ಲಿ ಅಧಿವೇಶನಕ್ಕೆ ಅಡೆತಡೆ ಎದುರಾಗದಂತೆ ಎಚ್ಚರ ವಹಿಸಲಾಗುವುದು. ಜತೆಗೆ ಶಬ್ದ ಮತ್ತು ವಾಯು ಮಾಲಿನ್ಯ ಆಗದಂತೆಯೂ ನಿಗಾ ವಹಿಸಲಾಗುವುದು,'' ಎಂದು ಅಧಿಕಾರಿಗಳು ಭರವಸೆ ನೀಡಿದರು. ನಿರ್ಮಾಣ ಕಾಮಗಾರಿ ಕುರಿತು ನಿಗಾ ವಹಿಸಲು ಸಮಿತಿಯೊಂದನ್ನು ರಚಿಸಲೂ ಸಭೆಯಲ್ಲಿ ತೀರ್ಮಾನಿಸಲಾಯಿತು.

**ಕಾಗದ ರಹಿತ ಕಚೇರಿ:** ಹೊಸ ಸಂಸತ್ ಭವನದಲ್ಲಿ ಪ್ರತಿ ಸಂಸದರಿಗೂ ಪ್ರತ್ಯೇಕ ಕೊಠಡಿಗಳಿರುತ್ತವೆ ಹಾಗೂ ಅವು ಕಾಗದರಹಿತ ಕೊಠಡಿಗಳಾಗಿರುತ್ತವೆ. ಈ ಕೊಠಡಿಗಳಲ್ಲಿ ಅತ್ಯಾಧುನಿಕ ಸಂವಹನ ಮತ್ತು ಡಿಜಿಟಲ್ ತಂತ್ರಜ್ಞಾನ ಬಳಸಲಾಗುತ್ತದೆ.

ಲೋಕಸಭೆಯಲ್ಲಿ 888 ಮತ್ತು ರಾಜ್ಯಸಭೆಯಲ್ಲಿ 384 ಸದಸ್ಯರಿಗೆ ಆಸನ ವ್ಯವಸ್ಥೆ ಕಲ್ಪಿಸಲಾಗುತ್ತದೆ. ಈಗ ಲೋಕಸಭೆ ಸದಸ್ಯರ ಸಂಖ್ಯೆ 543 ಮತ್ತು ರಾಜ್ಯಸಭೆ ಬಲ 245. ಭವಿಷ್ಯದಲ್ಲಿ ಸದಸ್ಯ ಸಂಖ್ಯೆ ಹೆಚ್ಚಳವಾಗಬಹುದು ಎನ್ನುವುದನ್ನು ಗಮನಲ್ಲಿಟ್ಟುಕೊಂಡು ಆಸನ ಸಾಮರ್ಥ್ಯ ಹೆಚ್ಚಿಸಲಾಗುತ್ತಿದೆ.

## 83 ಲಕ್ಷ ರೂಪಾಯಿ ವೆಚ್ಚ!

**ಈಗಿರುವ ಸಂಸತ್ ಭವನವನ್ನು ಬ್ರಿಟಿಷರ ಅವಧಿಯಲ್ಲಿ ನಿರ್ಮಿಸಲಾಗಿದೆ. ಆಗಿನ ಕಾಲದಲ್ಲಿ ತಗಲಿದ ನಿರ್ಮಾಣ ವೆಚ್ಚ ಕೇವಲ 83 ಲಕ್ಷ ರೂಪಾಯಿ! ಆರು ವರ್ಷಗಳಲ್ಲಿ ನಿರ್ಮಾಣ ಪೂರ್ಣಗೊಂಡಿದೆ. ಬ್ರಿಟಿಷ್ ವಾಸ್ತುಶಿಲ್ಪಿ ಎಡ್ವಿನ್ ಲೂಟನ್ಸ್ ಸಂಸತ್ ಭವನದ ವಿನ್ಯಾಸ ರೂಪಿಸಿದ್ದರೆ, ಹರ್ಬರ್ಟ್ ಬೇಕರ್ ನಿರ್ಮಾಣ ಕಾಮಗಾರಿಯ ಉಸ್ತುವಾರಿ ವಹಿಸಿದ್ದರು. 1921ರ ಫೆ.12ರಂದು ಶಂಕುಸ್ಥಾಪನೆ ನೆರವೇರಿಸಲಾಗಿತ್ತು. ಅಂದಿನ ಗವರ್ನರ್ ಜನರಲ್ ಲಾರ್ಡ್ ಇರ್ವಿನ್ ಅವರು 1927ರ ಜ.18ರಂದು ಉದ್ಘಾಟನೆ ನೆರವೇರಿಸಿದ್ದರು.**